THE TIMES OF INDIA, MANGALURU
MONDAY, SEPTEMBER 26, 2022

# Candlelight walk held

TIMES NEWS NETWORK

**Udupi:** Kasturba Medical College and Kasturba Hospital, Manipal, along with AccessLife assistance Foundation, were lit in gold for the cause of fighting childhood cancer on Saturday. Dr Sharath Kumar Rao, dean KMC, Manipal, said that the hospital premise is lit up in gold colour, because it symbolises a precious metal, and is therefore the perfect colour to reflect the most precious thing in our lives – our children— he said.

## CHILDHOOD CANCER AWARENESS

Childhood cancers are extremely curable, if detected early and treated in the right place, by the right team. September being the month for childhood cancer awareness, the division of paediatric hematology and oncology, along with AccessLife Assistance Foundation, arranged a candlelight walk.

Dr Vasudeva Bhat K, associate professor and in-charge head of the division, said, "Approximately 78,000 children are diagnosed with cancer every year in India, and the lower cure rates in our country is mainly due to delayed referrals, the stigma attached with cancer, and associated infections."

ಕನ್ನಡಪ್ರಭ
ಸೋಮವಾರ 26.9.2022

# ಮಣಿಪಾಲ ಕೆಎಂಸಿಯಲ್ಲಿ ಮಕ್ಕಳ ಕ್ಯಾನ್ಸರ್ ಜಾಗೃತಿಗಾಗಿ ಕ್ಯಾಂಡಲ್ ವಾಕ್

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗವು ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದಲ್ಲಿ ಶನಿವಾರ ಬಾಲ್ಯದ ಕ್ಯಾನ್ಸರ್ ಜಾಗೃತಿಗಾಗಿ ಕ್ಯಾಂಡಲ್ ವಾಕ್ ಆಯೋಜಿತ್ತು. ಈ ಜಾಗೃತಿಯ ದ್ಯೋತಕವಾಗಿ ಆಸ್ಪತ್ರೆ ಕಟ್ಟಡಕ್ಕೆ ಚಿನ್ನದ ಬಣ್ಣದ ಬೆಳಕನ್ನು ಹಾಯಿಸಲಾಗಿತ್ತು..

ವಿಭಾಗದ ಮುಖ್ಯಸ್ಥ ಡಾ. ವಾಸುದೇವ ಭಟ್ ಕೆ. ಮಾತನಾಡುತ್ತಾ, ಭಾರತದಲ್ಲಿ ಪ್ರತಿವರ್ಷ ಸುಮಾರು 78,000 ಮಕ್ಕಳು ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಆದರೆ ವಿಳಂಬ ಪತ್ತೆ ಮತ್ತು ವಿಳಂಬ ಚಿಕಿತ್ಸೆಯಿಂದಾಗಿ ಕ್ಯಾನ್ಸರ್ ಗುಣಮುಖವಾಗುವ ದರ ಕಡಿಮೆ ಇದೆ ಮತ್ತು ಕ್ಯಾನ್ಸರ್ ಒಂದು ಕಳಂಕ ಎನ್ನುವ ಭಾವನೆ ಮೂಡಿದೆ ಎಂದರು.

ಕಾಲೇಜಿನ ಡೀನ್ ಡಾ. ಶರತ್ ಕುಮಾರ್ ರಾವ್ ಅವರು ಬಾಲ್ಯದ ಕ್ಯಾನ್ಸರ್ ಜಾಗೃತಿ ಕರಪತ್ರ ಬಿಡುಗಡೆ ಮಾಡಿದರು. ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಉಪಸ್ಥಿತರಿದ್ದರು. ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಅರ್ಚನಾ ಎಂ.ವಿ. ಕಾರ್ಯಕ್ರಮ ನಿರೂಪಿಸಿದರು.

ಕ್ಯಾಂಡಲ್ ನಡಿಗೆಯು ಕಾಲೇಜಿನ ಮುಖ್ಯ ದ್ವಾರದಿಂದ ಹೊರಟು ನಗರದ ಟೈಗರ್ ಸರ್ಕಲ್ ಮೂಲಕ ಮಾಹೆಯ ಆಕ್ಸೆಸ್ ಲೈಫ್ ಕೇಂದ್ರದವರೆಗೆ ನಡೆಯಿತು. ಇದರಲ್ಲಿ ನೂರಾರು ವಿದ್ಯಾರ್ಥಿಗಳು, ವೈದ್ಯರು, ಆರೋಗ್ಯ ಕಾರ್ಯಕರ್ತರು ಭಾಗವಹಿಸಿ, ಕ್ಯಾನ್ಸರ್‌ನಿಂದ ಬಳಲುತ್ತಿರುವ ಮಕ್ಕಳ ಮತ್ತು ಅವರ ಆರೈಕೆ ಮಾಡುವವರಿಗೆ ಬೆಂಬಲ ವ್ಯಕ್ತಪಡಿಸಿದರು.




ಮಣಿಪಾಲ ಕೆಎಂಸಿಯಲ್ಲಿ ಮಕ್ಕಳ ಕ್ಯಾನ್ಸರ್ ಜಾಗೃತಿಗಾಗಿ ಕ್ಯಾಂಡಲ್ ವಾಕ್ ನಡೆಯಿತು.

ಉದಯವಾಣಿ
ಸುದಿನ

ಮಣಿಪಾಲ
2022
ಸೆಪ್ಟಂಬರ್ 25 | ರವಿವಾರ

▶ ಮಣಿಪಾಲ ಕೆಎಂಸಿ, ಕಸ್ತೂರ್ಬಾ ಆಸ್ಪತ್ರೆ

# ಬಾಲ್ಯದ ಕ್ಯಾನ್ಸರ್ ಜಾಗೃತಿಗೆ ಮೇಣದ ಬತ್ತಿ ನಡಿಗೆ



ಕೆಎಂಸಿ ಯಿಂದ ಬಾಲ್ಯದ ಕಾನ್ಸರ್ ಜಾಗೃತಿಗೆ ಮೊಂಬತ್ತಿ ಪ್ರದರ್ಶಿಸ ಲಾಯಿತು.

**ಮಣಿಪಾಲ, ಸೆ. 24:** ಮಣಿಪಾಲದ ಕೆಎಂಸಿ ಮತ್ತು ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ, ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದಲ್ಲಿ ಶನಿವಾರ ಬಾಲ್ಯದ ಕ್ಯಾನ್ಸರ್‌ಗೆ ಸೂಚಕವಾದ ಚಿನ್ನದ ಬಣ್ಣದಲ್ಲಿ ರೂಪಾಂತರಗೊಂಡಿತು. ಬಾಲ್ಯದ ಕ್ಯಾನ್ಸರ್‌ಗಳನ್ನು ಆರಂಭಿಕ ಹಂತದಲ್ಲಿ ಪತ್ತೆಮಾಡಿ ಮತ್ತು ತಜ್ಞ ವೈದ್ಯರ ತಂಡದ ಮೂಲಕ ಸರಿಯಾದ ಸಮಯದಲ್ಲಿ ಚಿಕಿತ್ಸೆ ದೊರೆತರೆ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ ಎಂಬ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಸೆಪ್ಟಂಬರ್ ತಿಂಗಳು ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸವಾಗಿದೆ. ಬಾಲ್ಯದ ಕ್ಯಾನ್ಸರ್ ಬಗ್ಗೆಸಾರ್ವಜನಿಕರಲ್ಲಿಅರಿವುಮೂಡಿಸಲು ಮೊಂಬತ್ತಿ ನಡಿಗೆ ನಡೆಯಿತು.

ವಿಭಾಗದ ಮುಖ್ಯಸ್ಥ ಡಾ| ವಾಸುದೇವ ಭಟ್ ಕೆ. ಮಾತನಾಡಿ, ಭಾರತದಲ್ಲಿ ಪ್ರತೀ ವರ್ಷ ಸುಮಾರು 78,000 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ. ರೋಗವನ್ನು ವಿಳಂಬವಾಗಿ ಪತ್ತೆಮಾಡುವುದು, ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುವುದು ಮತ್ತು ಕ್ಯಾನ್ಸರ್ ಒಂದು ಕಳಂಕ ಎನ್ನುವ ಮನೋಭಾವದ ಕಾರಣದಿಂದ ಗುಣಮುಖರ ಸರಾಸರಿ ಕಡಿಮೆಯಿದೆ ಎಂದರು.

ಕೆಎಂಸಿ ಡೀನ್ ಡಾ| ಶರತ್ ಕುಮಾರ್ ರಾವ್, ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಮಾತನಾಡಿದರು.

ನಡಿಗೆಯು ಕೆಎಂಸಿ ಮುಖ್ಯದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ ಲೈಫ್ ಮಾಹೆ ಮಣಿಪಾಲದವರೆಗೆ ನಡೆಯಿತು.

ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ| ಅರ್ಚನಾ ಎಂ.ವಿ. ನಿರೂಪಿಸಿದರು.

ಪ್ರಜಾವಾಣಿ

ಭಾನುವಾರ • ಸೆಪ್ಟೆಂಬರ್ 25, 2022

# ಕ್ಯಾನ್ಸರ್ ಜಾಗೃತಿಗೆ ಮೇಣದ ಬತ್ತಿ ನಡಿಗೆ

ಪ್ರಜಾವಾಣಿ ವಾರ್ತೆ

ಉಡುಪಿ: ಬಾಲ್ಯದ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಶನಿವಾರ ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜು, ಕೆಎಂಸಿ, ಅಂಕೊಲಜಿ ವಿಭಾಗ, ಮಕ್ಕಳ ರಕ್ತಶಾಸ್ತ್ರ ವಿಭಾಗ ಹಾಗೂ ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದಲ್ಲಿ ಮೇಣದ ಬತ್ತಿ ನಡಿಗೆ ನಡೆಯಿತು.

ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಕಾರ್ಯಕ್ರಮದಲ್ಲಿ ಮಾತನಾಡಿ, 'ಭಾರತದಲ್ಲಿ ಪ್ರತಿ ವರ್ಷ 78,000ದಷ್ಟು ಮಕ್ಕಳು ಕ್ಯಾನ್ಸರ್‌ನಿಂದ ಬಳಲುತ್ತಾರೆ. ವಿಳಂಬ ರೋಗ ಪತ್ತೆ, ತಡವಾದ ಚಿಕಿತ್ಸೆ ಕಾರಣಕ್ಕೆ ಕ್ಯಾನ್ಸರ್ ಒಂದು ಕಳಂಕಿತ ರೋಗ ಎಂಬ ಹಣೆಪಟ್ಟಿ ಹೊಂದಿದ್ದು, ಕಾಯಿಲೆಯಿಂದ ಗುಣಮುಖರಾಗುವವರ ದರವೂ ಕಡಿಮೆ ಇದೆ ಎಂದರು.

ಮಣಿಪಾಲದ ಕಸ್ತೂರಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಶರತ್ ಕುಮಾರ್ ಬಾಲ್ಯದ ಕ್ಯಾನ್ಸರ್ ಜಾಗೃತಿಕರಪತ್ರಬಿಡುಗಡೆಗೊಳಿಸಿ, 'ಚಿನ್ನ ಅಮೂಲ್ಯವಾದ ಲೋಹವಾಗಿರುವ ಕಾರಣ ಸಾಂಕೇತಿಕವಾಗಿ ಆಸ್ಪತ್ರೆಯ ಆವರಣವನ್ನು ಚಿನ್ನದ ಬೆಳಕಿನಿಂದ ಬೆಳಗಿಸಲಾಗಿದೆ. ಜೀವನದಲ್ಲಿ ಮಕ್ಕಳು ಅತ್ಯಮೂಲ್ಯ ವಸ್ತು ಎಂಬುದನ್ನು ಮರೆಯಬಾರದು ಎಂದರು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, 'ಆಸ್ಪತ್ರೆಯು ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಗುಣಮಟ್ಟದ ಚಿಕಿತ್ಸೆ ಹಾಗೂ ಸಮಗ್ರ ಆರೈಕೆ ನೀಡುತ್ತಿದೆ ಎಂದರು.

ಮೇಣದ ಬತ್ತಿ ನಡಿಗೆಯು ಕಸ್ತೂರಬಾ ವೈದ್ಯಕೀಯ ಕಾಲೇಜಿನ ಮುಖ್ಯ ದ್ವಾರದಿಂದ ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ ಲೈಫ್ ಮಾಹೆವರೆಗೂ ನಡೆಯಿತು. ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂಸೇವಕರು ಭಾಗವಹಿಸಿ ಕ್ಯಾನ್ಸರ್‌ನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರನ್ನು ಆರೈಕೆ ಮಾಡುವವರಿಗೆ ಬೆಂಬಲ ಸೂಚಿಸುವ ಭಾಗವಾಗಿ ಮೇಣದ ಬತ್ತಿ ಪ್ರದರ್ಶಿಸಿದರು. ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಎಂ.ವಿ.ಅರ್ಚನಾ ಕಾರ್ಯಕ್ರಮ ನಿರೂಪಿಸಿದರು.



ಬಾಲ್ಯದ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಶನಿವಾರ ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜು, ಕೆಎಂಸಿ, ಆಂಕಾಲಜಿ ವಿಭಾಗ, ಮಕ್ಕಳ ರಕ್ತಶಾಸ್ತ್ರ ವಿಭಾಗ ಹಾಗೂ ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದಲ್ಲಿ ಮೇಣದ ಬತ್ತಿ ನಡಿಗೆ ನಡೆಯಿತು.

ವಿಜಯವಾಣಿ
VIJAYAVANI » MANGALURU
ಭಾನುವಾರ 25 ಸೆಪ್ಟೆಂಬರ್ 2022
25 SEPTEMBER 2022

# ಬಾಲ್ಯದ ಕ್ಯಾನ್ಸರ್ ಜಾಗೃತಿಗೆ ಮೇಣದ ಬತ್ತಿ ನಡಿಗೆ



ಬಾಲ್ಯದ ಕ್ಯಾನ್ಸರ್ ಜಾಗೃತಿಗಾಗಿ ಮೇಣದ ಬತ್ತಿ ನಡಿಗೆ ಕಾರ್ಯಕ್ರಮ ನಡೆಯಿತು.

■ ವಿಜಯವಾಣಿ ಸುದ್ದಿಜಾಲ ಉಡುಪಿ

ಭಾರತದಲ್ಲಿ ಪ್ರತಿ ವರ್ಷ 78 ಸಾವಿರ ಮಕ್ಕಳು ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ವಿಳಂಬವಾಗಿ ಪತ್ತೆಮಾಡುವುದು, ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುವುದು, ಕ್ಯಾನ್ಸರ್ ಒಂದು ಕಳಂಕ ಎಂಬ ಮನೋಭಾವದಿಂದಾಗಿ ಸೂಕ್ತ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿಲ್ಲ. ಇದರಿಂದ ಗುಣವಾಗುವ ಪ್ರಮಾಣವೂ ಕಡಿಮೆಯಾಗಿದೆ ಎಂದು ಕಸ್ತೂರ್ಬಾ ಆಸ್ಪತ್ರೆ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಕೆ. ಹೇಳಿದರು.

ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸ ಅಂಗವಾಗಿ ಮಣಿಪಾಲ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಆಕ್ಸೆಸ್ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದೊಂದಿಗೆ ನಡೆದ ಮೇಣದಬತ್ತಿ ನಡಿಗೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಶರತ್ ಕುಮಾರ್ ರಾವ್ ಬಾಲ್ಯದ ಕ್ಯಾನ್ಸರ್ ಜಾಗೃತಿ ಕುರಿತು ಕರಪತ್ರ ಬಿಡುಗಡೆ ಮಾಡಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಉಪಸ್ಥಿತರಿದ್ದರು.

ನಡಿಗೆಯು ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಮುಖ್ಯ ದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ಲೈಫ್‌ವರೆಗೆ ನಡೆಯಿತು. ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾ ಕಾರ್ಯಕ್ರಮ ನಿರೂಪಿಸಿದರು.

**DAIJIWORLD**

# Manipal: Candlelight walk as part of childhood cancer awareness month held

Sat, Sep 24 2022 08:30:56 PM

*Media Release*

*Daijiworld Media Networks - Udupi*

**Manipal, Sept 24:** Kasturba Medical College and Kasturba Hospital, Manipal along with AccessLife Assistance Foundation held a candlelight walk to raise awareness on childhood cancer on September 24.

Childhood cancers are extremely curable if detected early and treated at right place by the right team. September being the month for childhood cancer awareness, the division of Pediatric Hematology and Oncology, Kasturba Medical College and Kasturba Hospital, Manipal along with Access Life Assistance Foundation arranged a candle light walk to raise awareness amongst general public about childhood cancers.




Text
NO ONE FIGHTS ALONE
daijiworld.com


Text
NO ONE FIGHTS ALONE
daijiworld.com


Text
NO ONE FIGHTS ALONE
daijiworld.com


Text
NO ONE FIGHTS ALONE
daijiworld.com







Dr Vasudeva Bhat K, associate professor and incharge head of the division addressed the event and said, "Approximately 78,000 children are diagnosed with cancer every year in India and the lower cure rates in our country is mainly due to delayed referrals, stigma attached with cancer and associated infections."

Dr Sharath Kumar Rao, dean of Kasturba Medical College, Manipal released the brochure on childhood cancer awareness. He said,"The hospital premise is lightened up in gold because gold symbolises a precious metal, and is therefore the perfect colour to reflect the most precious thing in our lives – our children."

Dr Avinash Shetty, medical superintendent of Kasturba Hospital, Manipal said in his talk, "The hospital will ensure holistic care to these children to enable them to complete the therapy without any interruptions."

The walk was from main entrance of Kasturba Medical College, tiger circle to AccessLife MAHE, Manipal centre. The event witnessed health care workers of the hospital and volunteers in large numbers walking along with children with cancer and their caregivers to show sign of support for the cause. Dr Archana M V, assistant professor from the department was the master of ceremony for the event.

## NAMMA UDUPI BULLETIN



# ಕ್ಯಾನ್ಸರ್ ಜಾಗೃತಿ- ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ ವತಿಯಿಂದ ಕ್ಯಾಂಡಲ್ ಲೈಟ್ ನಡಿಗೆ

By **Udupi Bulletin News Desk** - September 24, 2022 0



**ಮಣಿಪಾಲ:** ಕಸ್ತೂರ್ಬಾ ಮೆಡಿಕಲ್ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು, ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ನ ಸಹಯೋಗದೊಂದಿಗೆ ಬಾಲ್ಯದ ಕ್ಯಾನ್ಸರ್ ಗೆ ಸೂಚಕವಾದ ಚಿನ್ನದ ಬಣ್ಣದಲ್ಲಿ ರೂಪಾಂತರಗೊಂಡಿತು.

ಬಾಲ್ಯದ ಕ್ಯಾನ್ಸರ್ ಗಳನ್ನು ಆರಂಭಿಕ ಹಂತದಲ್ಲಿ ಪತ್ತೆ ಮಾಡಿ ಮತ್ತು ತಜ್ಞ ವೈದ್ಯರ ತಂಡದ ಮೂಲಕ ಸರಿಯಾದ ಸಮಯದಲ್ಲಿ ಚಿಕಿತ್ಸೆ ದೊರೆತರೆ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ.

ಸೆಪ್ಟೆಂಬರ್ ತಿಂಗಳು ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸವಾಗಿದ್ದು, ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲದ ಮಕ್ಕಳ ರಕ್ತಶಾಸ್ತ್ರ, ಮತ್ತು ಆಂಕೊಲಾಜಿ ವಿಭಾಗವು ಆಕ್ಸೆಸ್ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದೊಂದಿಗೆ ಬಾಲ್ಯದ ಕ್ಯಾನ್ಸರ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಇಂದು ಮೇಣದ ಬತ್ತಿ ನಡಿಗೆ ಕಾರ್ಯಕ್ರಮ ಏರ್ಪಡಿಸಿತ್ತು.

ವಿಭಾಗದ ಮುಖ್ಯಸ್ಥ ಡಾ. ವಾಸುದೇವ ಭಟ್ ಕೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಭಾರತದಲ್ಲಿ ಪ್ರತಿ ವರ್ಷ ಸುಮಾರು 78,000 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ. ನಮ್ಮ ದೇಶದಲ್ಲಿ ವಿಳಂಬವಾಗಿ ಪತ್ತೆಮಾಡುವುದು, ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುವುದು ಮತ್ತು ಕ್ಯಾನ್ಸರ್ ಒಂದು ಕಳಂಕ ಎನ್ನುವ ಮನೋಭಾವದ ಕಾರಣದಿಂದ ಗುಣವಾಗುವ ದರದಲ್ಲಿ ಕಡಿಮೆ ಇದೆ ಎಂದರು.

ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ. ಶರತ್ ಕುಮಾರ್ ರಾವ್ ಅವರು ಬಾಲ್ಯದ ಕ್ಯಾನ್ಸರ್ ಜಾಗೃತಿ ಕುರಿತು ಕರಪತ್ರ ಬಿಡುಗಡೆ ಮಾಡಿ ಮಾತನಾಡಿ. ಚಿನ್ನವು ಅಮೂಲ್ಯವಾದ ಲೋಹವನ್ನು ಸಾಂಕೇತಿಸುವುದರಿಂದ ಆಸ್ಪತ್ರೆಯ ಆವರಣವನ್ನು ಚಿನ್ನದಂತ ಬೆಳಕಿನಿಂದ ಬೆಳಗಿಸಲಾಗಿದೆ ಮತ್ತು ನಮ್ಮ ಜೀವನದಲ್ಲಿ ಅತ್ಯಮೂಲ್ಯವಾದ ವಸ್ತು ಅಂದರೆ ನಮ್ಮ ಮಕ್ಕಳನ್ನು ಪ್ರತಿಬಿಂಬಿಸಲು ಇದು ಪರಿಪೂರ್ಣ ಬಣ್ಣವಾಗಿದೆ ಎಂದರು.




ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಮಾತನಾಡಿ, ಆಸ್ಪತ್ರೆಯು ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಯಾವುದೇ ಅಡೆತಡೆಗಳಿಲ್ಲದೆ ಚಿಕಿತ್ಸೆಯನ್ನು ಪೂರ್ಣಗೊಳಿಸಲು ಅವರಿಗೆ ಸಮಗ್ರ ಆರೈಕೆಯನ್ನು ಖಚಿತಪಡಿಸುತ್ತದೆ ಎಂದರು.

ನಡಿಗೆಯು ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಮುಖ್ಯ ದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ಲೈಫ್ ಮಾಹೆ ಮಣಿಪಾಲದವರೆಗೆ ನಡೆಯಿತು. ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂಸೇವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ಯಾನ್ಸರ್ ನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರ ಆರೈಕೆ ಮಾಡುವವರ ಬೆಂಬಲದ ಸಂಕೇತವನ್ನು ತೋರಿಸಲು ಸಾಕ್ಷಿಯಾದರು. ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಅರ್ಚನಾ ಎಂ ವಿ ಕಾರ್ಯಕ್ರಮ ನಿರೂಪಿಸಿದರು.

ಜನಮನದ ಸಾರಥಿ
ವಾರ್ತಾ ಭಾರತಿ

# ಮಣಿಪಾಲ ಕೆಎಂಸಿ ಕಾಲೇಜು, ಆಸ್ಪತ್ರೆಯ ವತಿಯಿಂದ ಬಾಲ್ಯದ ಕ್ಯಾನ್ಸರ್ ಜಾಗೃತಿಗಾಗಿ ಮೇಣ ಬತ್ತಿಯೊಂದಿಗೆ ನಡಿಗೆ

FACEBOOK TWITTER GOOGLE+ LINKEDIN EMAIL

ವಾರ್ತಾ ಭಾರತಿ Sep 24, 2022, 9:02 PM IST



ಉಡುಪಿ, ಸೆ.24: ಮಣಿಪಾಲದ ಕಸ್ತೂರ್ಬಾ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯು, ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್‌ನ ಸಹಯೋಗದೊಂದಿಗೆ ಶನಿವಾರ ಸಂಜೆ ಮಣಿಪಾಲದಲ್ಲಿ ಬಾಲ್ಯದ ಕ್ಯಾನ್ಸರ್ (ಚೈಲ್ಡ್‌ಹುಡ್ ಕ್ಯಾನ್ಸರ್) ಜಾಗೃತ ಮಾಸದ ಅಂಗವಾಗಿ ಮೇಣದ ಬತ್ತಿ ನಡಿಗೆಯನ್ನು ಆಯೋಜಿಸಿತ್ತು.

ಪುಟ್ಟ ಮಕ್ಕಳಲ್ಲೂ ಕಂಡುಬರುತ್ತಿರುವ ಬಾಲ್ಯದ ಕ್ಯಾನ್ಸರ್‌ನ್ನು ಆರಂಭಿಕ ಹಂತದಲ್ಲೇ ಪತ್ತೆಮಾಡಿ, ತಜ್ಞ ವೈದ್ಯರ ತಂಡದ ಮೂಲಕ ಸರಿಯಾದ ಸಮಯದಲ್ಲಿ ಚಿಕಿತ್ಸೆ ನೀಡಿ ಸಂಪೂರ್ಣವಾಗಿ ಗುಣಮುಖರಾಗುವಂತೆ ಮಾಡಿ ಎಂಬ ಸಂದೇಶವನ್ನು ಮೇಣದ ಬತ್ತಿ ನಡಿಗೆಯೊಂದಿಗೆ ಸಾರ್ವಜನಿಕರಿಗೆ ತಲುಪಿಸಲಾಯಿತು.

ಸೆಪ್ಟೆಂಬರ್ ತಿಂಗಳು ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸವಾಗಿದ್ದು, ಮಣಿಪಾಲ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೋಲಾಜಿ ವಿಭಾಗವು ಬಾಲ್ಯದ ಕ್ಯಾನ್ಸರ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮೇಣದಬತ್ತಿ ನಡಿಗೆ ಕಾರ್ಯಕ್ರಮ ಏರ್ಪಡಿಸಿತ್ತು.

**ವರ್ಷಕ್ಕೆ 78 ಸಾವಿರ ಮಕ್ಕಳಿಗೆ ಕ್ಯಾನ್ಸರ್:** ವಿಭಾಗದ ಮುಖ್ಯಸ್ಥ ಡಾ. ವಾಸುದೇವ ಭಟ್ ಕೆ. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, 'ಭಾರತದಲ್ಲಿ ಪ್ರತಿ ವರ್ಷ ಸುಮಾರು 78 ಸಾವಿರ ಮಕ್ಕಳು ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ರೋಗವು ನಮ್ಮ ದೇಶದಲ್ಲಿ ವಿಳಂಬವಾಗಿ ಪತ್ತೆಯಾಗುತ್ತಿರುವುದರಿಂದ ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುತ್ತಿದೆ. ಕ್ಯಾನ್ಸರ್ ಒಂದು ಕಳಂಕ ಎಂಬ ಜನರ ಮನೋಭಾವದ ಕಾರಣದಿಂದ ಗುಣವಾಗುವ ದರದಲ್ಲಿ ಕಡಿಮೆ ಇದೆ ಎಂದರು.

ಕೆಎಂಸಿ ಕಾಲೇಜಿನ ಡೀನ್ ಡಾ.ಶರತ್ ಕುಮಾರ್ ರಾವ್ ಬಾಲ್ಯದ ಕ್ಯಾನ್ಸರ್ ಜಾಗೃತಿ ಕುರಿತು ಕರಪತ್ರ ಬಿಡುಗಡೆ ಮಾಡಿ ಮಾತನಾಡಿ, ಚಿನ್ನವು ಅಮೂಲ್ಯ ವಾದ ಲೋಹವನ್ನು ಸಾಂಕೇತಿಸುವುದರಿಂದ ಆಸ್ಪತ್ರೆಯ ಆವರಣ ವನ್ನು ಚಿನ್ನದಂತ ಬೆಳಕಿನಿಂದ ಬೆಳಗಿಸಲಾಗಿದೆ. ನಮ್ಮ ಜೀವನದಲ್ಲಿ ಅತ್ಯಮೂಲ್ಯವಾದ ವಸ್ತು ಅಂದರೆ ನಮ್ಮ ಮಕ್ಕಳನ್ನು ಪ್ರತಿಬಿಂಬಿಸಲು ಇದು ಪರಿಪೂರ್ಣ ಬಣ್ಣವಾಗಿದೆ ಎಂದು ಹೇಳಿದರು.

ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, ಆಸ್ಪತ್ರೆಯು ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಯಾವುದೇ ಅಡೆತಡೆ ಗಳಿಲ್ಲದೆ ಚಿಕಿತ್ಸೆಯನ್ನು ಪೂರ್ಣಗೊಳಿಸಲು ಅವರಿಗೆ ಸಮಗ್ರ ಆರೈಕೆಯನ್ನು ಖಚಿತಪಡಿಸುತ್ತದೆ ಎಂದರು.

ನಡಿಗೆಯು ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಮುಖ್ಯ ದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ ಲೈಫ್ ಮಾಹೆ ಮಣಿಪಾಲದವರೆಗೆ ನಡೆಯಿತು. ನಡಿಗೆಯಲ್ಲಿ ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂ ಸೇವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ಯಾನ್ಸರ್‌ನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರ ಆರೈಕೆ ಮಾಡುವವರಿಗೆ ಬೆಂಬಲವನ್ನು ತೋರಿಸಿದರು.

ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾಎಂ.ವಿ. ಕಾರ್ಯಕ್ರಮ ನಿರೂಪಿಸಿದರು.


varthabharati.in


varthabharati.in


Accesslife
MAHE MANIPAL CENTRE
varthabharati.in


TEAM ACCESS
varthabharati.in

Coastal News

# ಕೆಎಂಸಿ ಮಣಿಪಾಲ: ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸ- ಮೇಣದ ಬತ್ತಿ ನಡಿಗೆ

September 25, 2022



ಮಣಿಪಾಲ, ಸೆ24: ಕಸ್ತೂರ್ಬಾ ಮೆಡಿಕಲ್ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ, ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ನ ಸಹಯೋಗದೊಂದಿಗೆ ಸೆ. 24 ರಂದು ಬಾಲ್ಯದ ಕ್ಯಾನ್ಸರ್ ಗೆ ಸೂಚಕವಾದ ಚಿನ್ನದ ಬಣ್ಣದಲ್ಲಿ ರೂಪಾಂತರ ಗೊಂಡಿತು. ಬಾಲ್ಯದ ಕ್ಯಾನ್ಸರ್ ಗಳನ್ನು ಆರಂಭಿಕ ಹಂತದಲ್ಲಿ ಪತ್ತೆಮಾಡಿ ಮತ್ತು ತಜ್ಞ ವೈದ್ಯರ ತಂಡದ ಮೂಲಕ ಸರಿಯಾದ ಸಮಯದಲ್ಲಿ ಚಿಕಿತ್ಸೆ ದೊರೆತರೆ ಸಂಪೂರ್ಣವಾಗಿ ಗುಣಪಡಿಸ ಬಹುದಾಗಿದೆ.



ಸೆಪ್ಟೆಂಬರ್ ತಿಂಗಳು ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸವಾಗಿದ್ದು, ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲದ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗವು ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದೊಂದಿಗೆ ಬಾಲ್ಯದ ಕ್ಯಾನ್ಸರ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮೇಣದಬತ್ತಿ ನಡಿಗೆ ಕಾರ್ಯಕ್ರಮ ಏರ್ಪಡಿಸಿತ್ತು. ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, "ಭಾರತದಲ್ಲಿ ಪ್ರತಿ ವರ್ಷ ಸುಮಾರು 78,000 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ. ನಮ್ಮ ದೇಶದಲ್ಲಿ ವಿಳಂಬವಾಗಿ ಪತ್ತೆಮಾಡುವುದು, ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುವುದು ಮತ್ತು ಕ್ಯಾನ್ಸರ್ ಒಂದು ಕಳಂಕ ಎನ್ನುವ ಮನೋಭಾವದ ಕಾರಣದಿಂದ ಗುಣವಾಗುವ ದರದಲ್ಲಿ ಕಡಿಮೆ ಇದೆ " ಎಂದರು.

ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಶರತ್ ಕುಮಾರ್ ರಾವ್ ಅವರು ಬಾಲ್ಯದ ಕ್ಯಾನ್ಸರ್ ಜಾಗೃತಿ ಕುರಿತು ಕರಪತ್ರ ಬಿಡುಗಡೆ ಮಾಡಿ ಮಾತನಾಡಿ "ಚಿನ್ನವು ಅಮೂಲ್ಯವಾದ ಲೋಹವನ್ನು ಸಂಕೇತಿಸುವುದರಿಂದ ಆಸ್ಪತ್ರೆಯ ಆವರಣವನ್ನು ಚಿನ್ನದಂತ ಬೆಳಕಿನಿಂದ ಬೆಳಗಿಸಲಾಗಿದೆ ಮತ್ತು ನಮ್ಮ ಜೀವನದಲ್ಲಿ ಅತ್ಯಮೂಲ್ಯವಾದ ವಸ್ತು ಅಂದರೆ ನಮ್ಮ ಮಕ್ಕಳನ್ನು ಪ್ರತಿಬಿಂಬಿಸಲು ಇದು ಪರಿಪೂರ್ಣ ಬಣ್ಣವಾಗಿದೆ" ಎಂದು ಹೇಳಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು , "ಆಸ್ಪತ್ರೆಯು ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಯಾವುದೇ ಅಡೆತಡೆಗಳಿಲ್ಲದೆ ಚಿಕಿತ್ಸೆಯನ್ನು ಪೂರ್ಣಗೊಳಿಸಲು ಅವರಿಗೆ ಸಮಗ್ರ ಆರೈಕೆಯನ್ನು ಖಚಿತಪಡಿಸುತ್ತದೆ" ಎಂದು ಹೇಳಿದರು.

ನಡಿಗೆಯು ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಮುಖ್ಯದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ಸ್ ಲೈಫ್ ಮನೆ ಮಣಿಪಾಲದವರೆಗೆ ನಡೆಯಿತು. ಈ ಕಾರ್ಯಕ್ರಮಕ್ಕೆ ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂಸೇವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ಯಾನ್ಸರ್ ನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರ ಆರೈಕೆ ಮಾಡುವವರ ಬೆಂಬಲದ ಸಂಕೇತವನ್ನು ತೋರಿಸಲು ಸಾಕ್ಷಿಯಾದರು. ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಅರ್ಚನಾ ಎಂ ವಿ ಅವರು ಕಾರ್ಯಕ್ರಮ ನಿರೂಪಿಸಿದರು.

# ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸದ ಅಂಗವಾಗಿ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ವತಿಯಿಂದ ಮೇಣದ ಬತ್ತಿ ನಡಿಗೆ

By Janardhan Kodavoor/Team karavalixpress, September 25, 2022



ಮಣಿಪಾಲ, 24ನೇ ಸೆಪ್ಟೆಂಬರ್ 2022:ಕಸ್ತೂರ್ಬಾ ಮೆಡಿಕಲ್ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು , ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ನ ಸಹಯೋಗದೊಂದಿಗೆ ಸೆಪ್ಟೆಂಬರ್ 24, 2022 ರಂದು ಬಾಲ್ಯದ ಕ್ಯಾನ್ಸರ್ ಗೆ ಸೂಚಕವಾದ ಚಿನ್ನದ ಬಣ್ಣದಲ್ಲಿ ರೂಪಾಂತರಗೊಂಡಿತು. ಬಾಲ್ಯದ ಕ್ಯಾನ್ಸರ್ ಗಳನ್ನು ಆರಂಭಿಕ ಹಂತದಲ್ಲಿ ಪತ್ತೆಮಾಡಿ ಮತ್ತು ತಜ್ಞ ವೈದ್ಯರ ತಂಡದ ಮೂಲಕ ಸರಿಯಾದ ಸಮಯದಲ್ಲಿ ಚಿಕಿತ್ಸೆ ದೊರೆತರೆ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ.

ಸೆಪ್ಟೆಂಬರ್ ತಿಂಗಳು ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸವಾಗಿದ್ದು, ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲದ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗವು ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದೊಂದಿಗೆ ಬಾಲ್ಯದ ಕ್ಯಾನ್ಸರ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮೇಣದಬತ್ತಿ ನಡಿಗೆ ಕಾರ್ಯಕ್ರಮ ಏರ್ಪಡಿಸಿತ್ತು. ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಕೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, "ಭಾರತದಲ್ಲಿ ಪ್ರತಿ ವರ್ಷ ಸುಮಾರು 78,000 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ. ನಮ್ಮ ದೇಶದಲ್ಲಿ ವಿಳಂಬವಾಗಿ ಪತ್ತೆಮಾಡುವುದು, ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುವುದು ಮತ್ತು ಕ್ಯಾನ್ಸರ್ ಒಂದು ಕಳಂಕ ಎನ್ನುವ ಮನೋಭಾವದ ಕಾರಣದಿಂದ ಗುಣವಾಗುವ ದರದಲ್ಲಿ ಕಡಿಮೆ ಇದೆ " ಎಂದರು. ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಶರತ್ ಕುಮಾರ್ ರಾವ್ ಅವರು ಬಾಲ್ಯದ ಕ್ಯಾನ್ಸರ್ ಜಾಗೃತಿ ಕುರಿತು ಕರಪತ್ರ ಬಿಡುಗಡೆ ಮಾಡಿ ಮಾತನಾಡಿ "ಚಿನ್ನವು ಅಮೂಲ್ಯವಾದ ಲೋಹವನ್ನು ಸಾಂಕೇತಿಸುವುದರಿಂದ ಆಸ್ಪತ್ರೆಯ ಆವರಣವನ್ನು ಚಿನ್ನದಂತ ಬೆಳಕಿನಿಂದ ಬೆಳಗಿಸಲಾಗಿದೆ ಮತ್ತು ನಮ್ಮ ಜೀವನದಲ್ಲಿ ಅತ್ಯಮೂಲ್ಯವಾದ ವಸ್ತು ಅಂದರೆ ನಮ್ಮ ಮಕ್ಕಳನ್ನು ಪ್ರತಿಬಿಂಬಿಸಲು ಇದು ಪರಿಪೂರ್ಣ ಬಣ್ಣವಾಗಿದೆ" ಎಂದು ಹೇಳಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು , "ಆಸ್ಪತ್ರೆಯು ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಯಾವುದೇ ಅಡೆತಡೆಗಳಿಲ್ಲದ ಚಿಕಿತ್ಸೆಯನ್ನು ಪೂರ್ಣಗೊಳಿಸಲು ಅವರಿಗೆ ಸಮಗ್ರ ಆರೈಕೆಯನ್ನು ಖಚಿತಪಡಿಸುತ್ತದೆ" ಎಂದು ಹೇಳಿದರು. ನಡಿಗೆಯು ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಮುಖ್ಯ ದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ ಲೈಫ್ ಮಾಹೆ ಮಣಿಪಾಲದವರೆಗೆ ನಡೆಯಿತು. ಈ ಕಾರ್ಯಕ್ರಮಕ್ಕೆ ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂಸೇವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ಯಾನ್ಸರ್ ನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರ ಆರೈಕೆ ಮಾಡುವವರ ಬೆಂಬಲದ ಸಂಕೇತವನ್ನು ತೋರಿಸಲು ಸಾಕ್ಷಿಯಾದರು. ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಅರ್ಚನಾ ಎಂ ವಿ ಅವರು ಕಾರ್ಯಕ್ರಮ ನಿರೂಪಿಸಿದರು.

ಉಡುಪಿ xpress

# ಬಾಲ್ಯದ ಕ್ಯಾನ್ಸರ್- ಜಾಗೃತಿ ಮಾಸ: ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ವತಿಯಿಂದ ಮೇಣದ ಬತ್ತಿ ಜಾಥಾ

September 25, 2022




ಮಣಿಪಾಲ: ಸೆ.24 ಶನಿವಾರದಂದು ಕಸ್ತೂರ್ಬಾ ಮೆಡಿಕಲ್ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆಯು ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದೊಂದಿಗೆ ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸದ ಅಂಗವಾಗಿ ಮೇಣದ ಬತ್ತಿ ನಡಿಗೆಯನ್ನು ಆಯೋಜಿಸಿತ್ತು. ಬಾಲ್ಯದ ಕ್ಯಾನ್ಸರನ್ನು ಆರಂಭಿಕ ಹಂತದಲ್ಲಿ ಪತ್ತೆಮಾಡಿ ಮತ್ತು ತಜ್ಞ ವೈದ್ಯರ ತಂಡದ ಮೂಲಕ ಸರಿಯಾದ ಸಮಯದಲ್ಲಿ ಚಿಕಿತ್ಸೆ ಕೊಡಿಸಿದರೆ ರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ.

ಸೆಪ್ಟೆಂಬರ್ ತಿಂಗಳು ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸವಾಗಿದ್ದು, ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲದ ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗವು ಆಕ್ಸೆಸ್ ಲೈಫ್ ಅಸಿಸ್ಟೆನ್ಸ್ ಫೌಂಡೇಶನ್ ಸಹಯೋಗದೊಂದಿಗೆ ಬಾಲ್ಯದ ಕ್ಯಾನ್ಸರ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕಾಲೇಜಿನ ಮುಖ್ಯ ದ್ವಾರದಿಂದ ಹೊರಟು ಟೈಗರ್ ಸರ್ಕಲ್ ಮೂಲಕ ಆಕ್ಸೆಸ್ ಲೈಫ್ ಮಾಹೆ ಮಣಿಪಾಲದವರೆಗೆ ಮೇಣದಬತ್ತಿ ನಡಿಗೆ ಕಾರ್ಯಕ್ರಮ ಏರ್ಪಡಿಸಿತ್ತು.

ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಕೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಭಾರತದಲ್ಲಿ ಪ್ರತಿ ವರ್ಷ ಸುಮಾರು 78,000 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ. ವಿಳಂಬ ಪತ್ತೆ, ನುರಿತ ತಜ್ಞರಲ್ಲಿಗೆ ಬರುವಾಗ ತಡವಾಗುವುದು ಮತ್ತು ಕ್ಯಾನ್ಸರ್ ಒಂದು ಕಳಂಕ ಎನ್ನುವ ಮನೋಭಾವದ ಕಾರಣದಿಂದ ಗುಣಮುಖವಾಗುವ ದರದಲ್ಲಿ ಇಳಿಕೆ ಇದೆ ಎಂದರು.

ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಶರತ್ ಕುಮಾರ್ ರಾವ್ ಬಾಲ್ಯದ ಕ್ಯಾನ್ಸರ್ ಜಾಗೃತಿ ಕುರಿತು ಕರಪತ್ರ ಬಿಡುಗಡೆ ಮಾಡಿ ಮಾತನಾಡಿ, ಚಿನ್ನವು ಅಮೂಲ್ಯವಾದ ಲೋಹವನ್ನು ಸಾಂಕೇತಿಸುವುದರಿಂದ ಆಸ್ಪತ್ರೆಯ ಆವರಣವನ್ನು ಚಿನ್ನದಂತ ಬೆಳಕಿನಿಂದ ಬೆಳಗಿಸಲಾಗಿದೆ ಮತ್ತು ನಮ್ಮ ಜೀವನದಲ್ಲಿ ಅತ್ಯಮೂಲ್ಯವಾದ ಜೀವ ಅಂದರೆ ನಮ್ಮ ಮಕ್ಕಳನ್ನು ಪ್ರತಿಬಿಂಬಿಸಲು ಇದು ಪರಿಪೂರ್ಣ ಬಣ್ಣವಾಗಿದೆ ಎಂದು ಹೇಳಿದರು.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, ಆಸ್ಪತ್ರೆಯು ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಯಾವುದೇ ಅಡೆತಡೆಗಳಿಲ್ಲದೆ ಚಿಕಿತ್ಸೆಯನ್ನು ಪೂರ್ಣಗೊಳಿಸಲು ಅವರಿಗೆ ಸಮಗ್ರ ಆರೈಕೆಯನ್ನು ಖಚಿತಪಡಿಸುತ್ತದೆ ಎಂದು ಹೇಳಿದರು.

ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂಸೇವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ಯಾನ್ಸರ್ ನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರ ಆರೈಕೆ ಮಾಡುವವರ ಬೆಂಬಲದ ಸಂಕೇತವನ್ನು ತೋರಿಸಲು ಸಾಕ್ಷಿಯಾದರು. ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಅರ್ಚನಾ ಎಂ ವಿ ಅವರು ಕಾರ್ಯಕ್ರಮ ನಿರೂಪಿಸಿದರು.

## Other link:

- https://publicnext.com/article/nid/Udupi/Mangalore/Health-and-Fitness/node=713980